ಅವಾಸ್ ಯೋಜನೆಗಳನ್ನು ಹಾಗೂ ನಗರ ಪ್ರದೇಶದಲ್ಲಿ ವಾಜಪೇಯಿ ನಗರ ವಸತಿ ಯೋಜನೆಗಳು ಜಾರಿಯಲ್ಲಿರುತ್ತವೆ.

ಈ) ವಸತಿ ಯೋಜನೆಗಳಡಿ ಸರ್ಕಾರವು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಮನೆಗಳ ಗುರಿಯನ್ನು ಹಾಗೂ ನಿವೇಶನ ರಹಿತರಿಗೆ ನಿವೇಶನ ಹಂಚಿಕೆಯ ಗುರಿಯನ್ನು ನಿಗದಿಪಡಿಸಿ ಮಾರ್ಗಸೂಚಿಗಳನ್ವಯ ಕ್ರಮ ಕೈಗೊಳ್ಳಲಾಗುವುದು.

ಸರ್ಕಾರಿ ಮತ್ತು ಅನುದಾನಿತ ಶಾಲೆಗಳು

1377(1668); ಡಾ॥ ರಫೀಕ್ ಅಹ್ಮದ್ ಎಸ್ (ತುಮಕೂರು ನಗರ)

ಅ) ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಉರ್ದು ಶಾಲೆಗಳನ್ನು ಹೊರತುಪಡಿಸಿ ಎಷ್ಟು ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿವೆ (ಎಲ್ಲಾ ಶಾಲೆಗಳ ವಿವರಗಳನ್ನು ನೀಡಿವುದು)

ಆ) ಈ ಶಾಲೆಗಳಲ್ಲಿ ಕಳೆದ 3 ವರ್ಷಗಳಲ್ಲಿ ಆಗಿರುವ ದಾಖಲಾತಿಗಳ ವಿವರ ಸಲ್ಲಿಸುವುದು.

ಇ) ಈ ಶಾಲೆಗಳಲ್ಲಿರುವ ಕುಂದು ಕೊರತೆಗಳೇನು; ಈ ಕೊರತೆಗಳನ್ನು ನಿವಾರಿಸಲು ಸರ್ಕಾರ ಯಾವ ಕ್ರಮಕ್ಕೈಗೊಂಡಿದೆ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಂಖ್ಯೆ – 16, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ – 32, ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ – 5, ಅನುದಾನಿತ ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ – 1, ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ – 14, ಅನುದಾನಿತ ಪ್ರೌಢ ಶಾಲೆಗಳ ಸಂಖ್ಯೆ – 27.

ಶಾಲೆಗಳ ಪಟ್ಟಿಯನ್ನು ಅನುಬಂಧ–1 ರಲ್ಲಿ ಲಗತ್ತಿಸಲಾಗಿದೆ.

ಆ) ಕಳೆದ 3 ವರ್ಷಗಳಲ್ಲಿ ಆಗಿರುವ ದಾಖಲಾತಿಗಳ ವಿವರವನ್ನು ಅನುಬಂಧ–1 ರಲ್ಲಿ ಲಗತ್ತಿಸಲಾಗಿದೆ.

ಇ) ತುಮಕೂರು ನಗರದಲ್ಲಿ ಸರ್ಕಾರಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಎಲ್ಲಾ ಶಾಲೆಗಳಿಗೆ ಕುಡಿಯುವ ನೀರು, ಹೆಣ್ಣು ಮಕ್ಕಳ ಶೌಚಾಲಯ ಮತ್ತು ಗಂಡು ಮಕ್ಕಳ ಶೌಚಾಲಯ ಲಭ್ಯವಿರುತ್ತದೆ.

ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಈ ಕೆಳಕಂಡ ಸೌಲಭ್ಯಗಳ ಅವಶ್ಯಕತೆ ಇರುತ್ತದೆ.

1. ರ್‍ಯಾಂಪ್ – 25

2. ಆಟದ ಮೈದಾನ – 13 ಶಾಲೆಗಳಿಗೆ ಅತ್ಯ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ.

ರಸ್ತೆ ಕಾಮಗಾರಿ

1378(1669); ಡಾ॥ ರಫೀಕ್ ಅಹ್ಮದ್ .ಎಸ್ (ತುಮಕೂರು ನಗರ)

ಅ) 2010–11, 2011–12, 2012–13ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯ ತುಮಕೂರು ಜಿಲ್ಲೆಯ ವ್ಯಾಪ್ತಿಯಲ್ಲಿ ತೆಗೆದುಕೊಂಡ ರಸ್ತೆ ಕಾಮಗಾರಿಗಳು ಯಾವುವು:

ಆ) ಈ ಕಾಮಗಾರಿಗಳು ಯಾವಾಗ ಪ್ರಾರಂಭವಾಗಿವೆ ಮತ್ತು ಯಾವಾಗ ಮುಕ್ತಾಯಗೊಳ್ಳಲಿವೆ;

ಇ) ಗುತ್ತಿಗೆದಾರರು ಇದುವರೆವಿಗೂ ಎಷ್ಟು ಹಣ ಖರ್ಚು ಮಾಡಿದ್ದಾರೆ; (ವಿವರ ನೀಡುವುದು);

ಈ) ಮುಂದಿನ ದಿನಗಳಲ್ಲಿ ತೆಗೆದುಕೊಳ್ಳಲು ಉದ್ದೇಶಿಸಿರುವ ರಸ್ತೆ ಕಾಮಗಾರಿಗಳು ಯಾವುವು?